OS No. 70/2022 PW-**2**

**ದಿನಾಂಕ 21.01.2023 ರಂದು ಸಾಕ್ಷಿಯನ್ನು ಕರೆಯಿಸಿ, ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ : ವಾದಿ ಪರ ವಕೀಲರಿಂದ :**

ನಾನು ನನ್ನ ಮುಖ್ಯ ವಿಚಾರಣಾ ಬಾಬ್ತು ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಹೇಳಿದ ವಿಚಾರಗಳೆಲ್ಲವೂ ಸತ್ಯವಾಗಿದ್ದು, ಅವುಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ.

ನಾನು ನನ್ನ ಪರ ಸಾಕ್ಷಿಯಾಗಿ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿದ್ದೇನೆ.

ಸಾಕ್ಷಿಯು ನಿಪಿ-1 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಇ) ಎಂದು ಗುರುತಿಸಲಾಯಿತು. ಸದರಿ ದಾಖಲೆಯಲ್ಲಿ ನಾನು ನನ್ನ ಸಹಿಯನ್ನು ಮಾಡಿದ ನಂತರ ಕೆಳಗೆ ತಂದೆ ಹೆಸರು ಮತ್ತು ವಿಳಾಸವನ್ನು ಬರೆಯಲಾಗಿದೆ. ಸದರಿ ದಾಖಲೆಗೆ ಇನ್ನೊಬ್ಬ ಸಾಕ್ಷಿದಾರರಾದ ಶಶಿಕುಮಾರ್ ರವರು ನನ್ನ ಸಮಕ್ಷಮ ಸಹಿ ಮಾಡಿರುತ್ತಾರೆ. ಅವರ ಸಹಿ ಕೆಳಗೆ ತಂದೆ ಹೆಸರು ಮತ್ತು ವಿಳಾಸವನ್ನು ಬರೆಯಲಾಗಿದೆ. ಸಾಕ್ಷಿಯು ಸದರಿ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿಪಿ-1(ಎಫ್) ಎಂದು ಗುರುತಿಸಲಾಯಿತು. ಸದರಿ ಪತ್ರವನ್ನು ಪತ್ರ ಬರಹಗಾರರಾದ ಎಂ ಎಸ್ ರವಿಶಂಕರ್ ರವರು ಬರೆದಿರುತ್ತಾರೆ. ಸಾಕ್ಷಿಯು ಸದರಿ ಅವರ ಸಹಿಯಾದ ನಿಪಿ-1(ಡಿ) ಅನ್ನು ನೋಡಿ ಗುರುತಿಸುತ್ತಾರೆ. ನನ್ನ ಸಮಕ್ಷಮ ವಾದಿ ಮತ್ತು ಪ್ರತಿವಾದಿಗಳು ಸಹಿಗಳನ್ನು ಮಾಡಿರುತ್ತಾರೆ. ಸಾಕ್ಷಿಯು ನಿಪಿ-1 ರಲ್ಲಿರುವ ವಾದಿ ಮತ್ತು ಪ್ರತಿವಾದಿಗಳ ಸಹಿಗಳನ್ನು ನೋಡಿ ಗುರುತಿಸುತ್ತಾರೆ.

**<u>ಪಾಟೀ ಸವಾಲು : ಪ್ರತಿವಾದಿಗಳ ಪರ ವಕೀಲರಿಂದ :</u>**

ಪ್ರತಿವಾದಿಗಳು ಮತ್ತು ಪ್ರತಿವಾದಿಗಳ ಪರ ವಕೀಲರು ಗೈರು ಹಾಜರಾಗಿದ್ದು, ಪ್ರತಿವಾದಿಗಳು ತಮ್ಮ ಪರವಾಗಿ ಯಾವುದೇ ಲಿಖಿತ ಹೇಳಿಕೆಯನ್ನು ಸಲ್ಲಿಸಿಲ್ಲ ಆದ್ದರಿಂದ ಪಾಟೀ ಸವಾಲನ್ನು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**<u>ಮರುವಿಚಾರಣೆ : ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ.ಹೇ.ಕೇ.ಸ.ಒ

ಹಿರಿಯ ಸಿವಿಲ್ ನ್ಯಾಯಾಧೀಶರು

ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.